ನಿ.72 (163)

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ 72ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ವಿಷಯ:**

ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳಾದ ಎಸ್.ನಿಜಲಿಂಗಪ್ಪನವರ ಹೆಸರಿನಲ್ಲಿ ಬೆಳಗಾವಿಯಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಸ್ಥಾಪನೆ ಮಾಡಲಾಗಿದ್ದು, ಆ ಭಾಗದ ರೈತರಿಗೆ ಕಬ್ಬು ಬೆಳೆಯ ಹೊಸ ತಳಿಗಳನ್ನು ಅಭಿವೃದ್ಧಿಪಡಿಸಲು ರೈತರಿಗೆ ಬೆಳೆಯ ಬಗ್ಗೆ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವ ಮೂಲಕ ಅವಶ್ಯ ಸಲಹೆಗಳನ್ನು ನೀಡುವ ಸಂಸ್ಥೆಯಾಗಿದೆ. ಹಣಕಾಸಿನ ತೊಂದರೆಯಿಂದ ಸದರಿ ಸಂಸ್ಥೆಯು ನಿರೀಕ್ಷಿತ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಮಹಾರಾಷ್ಟ್ರದ ಪುಣೆಯಲ್ಲಿ ಸ್ಥಾಪಿತವಾಗಿರುವ ವಸಂತದಾದಾ ಸಕ್ಕರೆ ಸಂಸ್ಥೆಯ ಮಾದರಿಯಲ್ಲಿ ಈ ಸಂಸ್ಥೆಯನ್ನು ಅಭಿವೃದ್ಧಿಗೊಳಿಸುವ ವಿಷಯದ ಕುರಿತು ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಸರ್ಕಾರದ ಉತ್ತರ:**

ರಾಜ್ಯದ ಉತ್ತರ ಭಾಗದ ಸಕ್ಕರೆ ಕಾರ್ಖಾನೆಗಳು ಮತ್ತು ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಕಬ್ಬಿನ ಮತ್ತು ಸಕ್ಕರೆಗೆ ಸಂಬಂಧಿಸಿದ ಸಂಶೋಧನೆ, ಶೈಕ್ಷಣಿಕತೆ ಮತ್ತು ವಿಸ್ತರಣಾ ಕೆಲಸಗಳನ್ನು ಉತ್ತೇಜಿಸಲು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಇದನ್ನು ಸರ್ಕಾರದ ಆದೇಶ ಸಂಖ್ಯೆ ಸಿಐ/193/ಎಸ್‌ಜಿಎಫ್/94 ದಿನಾಂಕ 08.10.2003 ರನ್ವಯ ಸ್ಥಾಪಿಸಲಾಗಿರುತ್ತದೆ. ಸದರಿ ಸಂಸ್ಥೆಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959 ಹಾಗೂ ನಿಯಮಗಳು, 1960 ರಡಿಯಲ್ಲಿ ನೋಂದಣಿ ಮಾಡಲಾಗಿದೆ. ಬೆಳಗಾವಿಯಲ್ಲಿ ಪ್ರಯೋಗಾಲಯ ಮತ್ತು ಆಡಳಿತ ಕಛೇರಿಯನ್ನು ನಿರ್ಮಿಸಲು ಸಂಸ್ಥೆಗೆ ಸರ್ಕಾರದಿಂದ 3.12 ಎಕರೆ ಜಮೀನನ್ನು ನೀಡಲಾಗಿರುತ್ತದೆ. ಇದಲ್ಲದೆ, ಕಬ್ಬಿನ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ರೂಪಿಸಲು ಬೆಳಗಾವಿ ಮತ್ತು ಹುಕ್ಕೇರಿ ತಾಲ್ಲೂಕುಗಳಲ್ಲಿ 143.31 ಎಕರೆ ಜಮೀನನ್ನು ಸಹಾ ಒದಗಿಸಲಾಗಿದೆ.

ಸಂಸ್ಥೆಯ ಸುಗಮ ಆಡಳಿತ ನಿರ್ವಹಣೆಗಾಗಿ 21 ಜನ ಸದಸ್ಯರನ್ನೊಳಗೊಂಡ ಆಡಳಿತ ಮಂಡಳಿಯನ್ನು ರಚಿಸಲಾಗಿದ್ದು, ಮಾನ್ಯ ಸಕ್ಕರೆ ಸಚಿವರು ಈ ಸಂಸ್ಥೆಯ ಆಡಳಿತ ಮಂಡಳಿಯ ಪದನಿಮಿತ್ತ ಅಧ್ಯಕ್ಷರಾಗಿರುತ್ತಾರೆ. ಆಡಳಿತ ಮಂಡಳಿಯ ಸದಸ್ಯರಲ್ಲಿ ಹಿರಿಯ ಅಧಿಕಾರಿಗಳು, ತಾಂತ್ರಿಕ ತಜ್ಞರು, ಕುಲಪತಿಗಳು ಹಾಗೂ 7 ಜನ ಸಕ್ಕರೆ ಕಾರ್ಖಾನೆಗಳ ಚುನಾಯಿತ ಪ್ರತಿನಿಧಿಗಳು ಇರುತ್ತಾರೆ. ಸಂಸ್ಥೆಯ ದೈನಂದಿನ ಕಾರ್ಯ ಚಟುವಟಿಕೆಗಳನ್ನು ಸುಗಮವಾಗಿ ನಡೆಸಿಕೊಂಡು ಹೋಗಲು ಒಟ್ಟು 28 ಹುದ್ದೆಗಳನ್ನು ಸೃಜಿಸಲಾಗಿದ್ದು, ಇವುಗಳಲ್ಲಿ 16 ತಾಂತ್ರಿಕ ಮತ್ತು 12 ಆಡಳಿತಾತ್ಮಕ ಹುದ್ದೆಗಳಾಗಿರುತ್ತವೆ. ಈವರೆವಿಗೆ ಒಟ್ಟು 10 ಹುದ್ದೆಗಳು ಭರ್ತಿಯಾಗಿರುತ್ತವೆ ಮತ್ತು ಖಾಲಿಯಿರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತವೆ.

ಸದರಿ ಸಂಸ್ಥೆಯು ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರವು ಒಟ್ಟು ರೂ.19.23 ಕೋಟಿಗಳಷ್ಟು ಅನುದಾನವನ್ನು ಹಂತ ಹಂತವಾಗಿ ಮಂಜೂರು ಮಾಡಿ ಬಿಡುಗಡೆ ಮಾಡಿರುತ್ತದೆ. ಇದಲ್ಲದೆ, ರಾಜ್ಯದ ಸಕ್ಕರೆ ಕಾರ್ಖಾನೆಗಳು ನುರಿಸಿದ ಪ್ರತಿ ಟನ್ ಕಬ್ಬಿಗೆ ರೂ.1/- ರಂತೆ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳಿಗಾಗಿ ವಂತಿಕೆಯನ್ನು ಪಾವತಿಸುವಂತೆ ಸರ್ಕಾರವು ಆದೇಶಿಸಿರುತ್ತದೆ. ಅದರಂತೆ ಸಕ್ಕರೆ ಕಾರ್ಖಾನೆಗಳು ಈವರೆವಿಗೆ ಒಟ್ಟು ರೂ.21.96 ಕೋಟಿಗಳಷ್ಟು ಸಂಸ್ಥೆಗೆ ಪಾವತಿಸಿರುತ್ತವೆ. ಇನ್ನೂ ರೂ.13.19 ಕೋಟಿಗಳಷ್ಟು ವಂತಿಕೆಯನ್ನು ಸಕ್ಕರೆ ಕಾರ್ಖಾನೆಗಳು ಪಾವತಿಸುವುದು ಬಾಕಿ ಇರುತ್ತದೆ. ಕೆಲವೊಂದು ಸಕ್ಕರೆ ಕಾರ್ಖಾನೆಗಳು ಪ್ರತಿ ಮೆ.ಟನ್ ಒಂದಕ್ಕೆ ರೂ.1/- ರಂತೆ ವಂತಿಕೆ ಪಾವತಿಸಬೇಕೆಂಬ ಸರ್ಕಾರದ ಆದೇಶವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿರುತ್ತವೆ. ಕಾರ್ಖಾನೆಗಳು ದಾಖಲಿಸಿರುವ ರಿಟ್ ಅರ್ಜಿಗಳಿಗೆ ಸರ್ಕಾರದ ವತಿಯಿಂದ ಮತ್ತು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ವತಿಯಿಂದ ಪ್ರತ್ಯೇಕವಾಗಿ ಕಂಡಿಕೆವಾರು ಪರಾ ಮತ್ತು ಆಕ್ಷೇಪಣಾ ಹೇಳಿಕೆಗಳನ್ನು ದಾಖಲಿಸಿದ್ದು, ಸಂಸ್ಥೆಯ ಹಿತದೃಷ್ಟಿಯಿಂದ ವಂತಿಕೆ ಹಣವನ್ನು ಪಾವತಿಸುವುದು ಅಗತ್ಯವಿರುತ್ತದೆ ಎಂಬ ಬಗ್ಗೆ ಮಾನ್ಯ ನ್ಯಾಯಾಲಯಕ್ಕೆ ಮನವರಿಕೆ ಮಾಡುವ ಸಂಬಂಧ ಎಲ್ಲಾ ಕಾನೂನಾತ್ಮಕ ಕ್ರಮಗಳನ್ನು ಸರ್ಕಾರದ ವತಿಯಿಂದ ಕೈಗೊಳ್ಳಲಾಗಿರುತ್ತದೆ.

-2-

**<u>ಸಂಸ್ಥೆಯು ಪ್ರಮುಖವಾಗಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿದೆ.</u>**

1. ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಅಭಿವೃದ್ಧಿ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು ಗುರುತಿಸಿ ಈ ಸಂಸ್ಥೆಯನ್ನು ಒಂದು ವೈಜ್ಞಾನಿಕ ಸಂಶೋಧನಾ ಸಂಸ್ಥೆಯೆಂದು ಮಾನ್ಯತೆ ನೀಡಿರುತ್ತದೆ.
2. ಕೇಂದ್ರ ಸರ್ಕಾರದ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು, ನವದೆಹಲಿ ಇವರು ಈ ಸಂಸ್ಥೆಯು ಸಕ್ಕರೆ ಕಾರ್ಖಾನೆಗಳಿಗೆ ಮತ್ತು ಕಬ್ಬು ಬೆಳೆಗಾರರಿಗೆ ಹೊಸ ತಳಿಗಳನ್ನು ನೀಡುತ್ತಿರುವುದನ್ನು ಗಮನಿಸಿ, ಇದನ್ನು ರಾಷ್ಟ್ರಮಟ್ಟದಲ್ಲಿರುವ ಕಬ್ಬು ಸಂಶೋಧನಾ ಕೇಂದ್ರಗಳಲ್ಲಿ ಒಂದು ಎಂದು ಪರಿಗಣಿಸಿರುತ್ತಾರೆ.
3. ಕಬ್ಬು ಬೆಳೆಗಾರರು ಹೆಚ್ಚಿನ ಇಳುವರಿಯನ್ನು ಸತತವಾಗಿ ಪಡೆಯಲು ರೋಗ ಹಾಗೂ ಕೀಟರಹಿತ ಬೀಜಗಳ ಅವಶ್ಯಕತೆ ಇರುವುದರಿಂದ ಈ ತಾಂತ್ರಿಕತೆಯನ್ನು ಅಳವಡಿಸಲು ಅಂಗಾಂಶ ಕೃಷಿ ಪ್ರಯೋಗಾಲಯವನ್ನು ಸ್ಥಾಪಿಸಲಾಗಿದೆ. ಆ ಮೂಲಕ ಸಕ್ಕರೆ ಕಾರ್ಖಾನೆಗಳು ಮತ್ತು ಕಬ್ಬು ಬೆಳೆಗಾರರಿಗೆ ಸಹಾಯ ನೀಡಲಾಗುತ್ತಿದೆ.
4. ಸರ್ಕಾರದಿಂದ ಸಂಸ್ಥೆಗೆ ಯರಗಟ್ಟಿ ಗ್ರಾಮದಲ್ಲಿ ಕಬ್ಬು ಸಂಶೋಧನೆ ಮತ್ತು ಅಭಿವೃದ್ಧಿಗಾಗಿ 50 ಎಕರೆ ಜಮೀನನ್ನು ನೀಡಲಾಗಿದೆ. ಇಲ್ಲಿ ಹೊಸ ತಳಿಗಳ ಅಭಿವೃದ್ಧಿ ಹಾಗೂ ಬೀಜೋತ್ಪಾದನೆ ಮತ್ತು ಇತರೆ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದೆ.
5. ಸಕ್ಕರೆ ಕಾರ್ಖಾನೆಗಳಿಗೆ ತಾಂತ್ರಿಕ ಮಾನವ ಸಂಪನ್ಮೂಲವನ್ನು ಒದಗಿಸಲು ಸಂಸ್ಥೆಯಲ್ಲಿ ಬಿ.ಎಸ್ಸಿ (ಸಕ್ಕರೆ ವಿಜ್ಞಾನ ಮತ್ತು ತಂತ್ರಜ್ಞಾನ) 3 ವರ್ಷಗಳ ಪದವಿ ಕೋರ್ಸನ್ನು ಪ್ರಾರಂಭಿಸಲಾಗಿದೆ ಹಾಗೂ ಎಂ.ಎಸ್ಸಿ (ಆಲ್ಕೋಹಾಲ್ ಟೆಕ್ನಾಲಜಿ ಮತ್ತು ಶುಗರ್ ಟೆಕ್ನಾಲಜಿ) ಸ್ನಾತಕೋತ್ತರ ಪದವಿ ತರಗತಿಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.
6. ಜೈವಿಕ ಶುದ್ಧೀಕರಣ ಪ್ರಯೋಗಾಲಯವನ್ನು ಸ್ಥಾಪಿಸಲಾಗಿದ್ದು, ಸಕ್ಕರೆ ಕಾರ್ಖಾನೆಗಳಿಗೆ ಸಕ್ಕರೆ ಗುಣಮಟ್ಟ, ಮೊಲ್ಯಾಸಿಸ್ ಮತ್ತು ಉದ್ದಿಮೆಗೆ ಅವಶ್ಯವಿರುವ ಇತರೆ ಗುಣಧರ್ಮಗಳ ವಿಶ್ಲೇಷಣೆ ಮಾಡಲಾಗುತ್ತಿದೆ.
7. ಸಂಸ್ಥೆಯು ಕಬ್ಬು ಮತ್ತು ಸಕ್ಕರೆ ಉದ್ಯಮದ ಹಲವಾರು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರತಿಷ್ಠಿತ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಹೊಸ ತಳಿಗಳ ಅಭಿವೃದ್ಧಿ ಮತ್ತು ತಾಂತ್ರಿಕ ಪ್ರಾವೀಣ್ಯತೆ ಪಡೆಯುವ ಸಂಬಂಧ ವಿಚಾರ ಸಂಕೀರ್ಣ ಮತ್ತು ಕಾರ್ಯಾಗಾರಗಳನ್ನು ಏರ್ಪಾಡು ಮಾಡುತ್ತಿದೆ.
8. ಕಬ್ಬು ಬೇಸಾಯದಲ್ಲಿ ಸಾವಯವ ಕೃಷಿಯನ್ನು ಅಳವಡಿಸುವ ನಿಟ್ಟಿನಲ್ಲಿ ಜೈವಿಕ ಪೀಡೆ ಮತ್ತು ಗೊಬ್ಬರಗಳ ಉತ್ಪಾದನಾ ಘಟಕ ಸ್ಥಾಪಿಸಲಾಗಿದೆ.
9. ಕಬ್ಬು ಮತ್ತು ಸಕ್ಕರೆ ಉದ್ದಿಮೆಗೆ ತಾಂತ್ರಿಕತೆಯನ್ನು ಒದಗಿಸುವ ನಿಟ್ಟಿನಲ್ಲಿ ಕಬ್ಬು ಬೆಳೆಗಾರರಿಗೆ ಮತ್ತು ಸಕ್ಕರೆ ಕಾರ್ಖಾನೆ ನೌಕರರಿಗೆ ತರಬೇತಿ, ವಿಚಾರಗೋಷ್ಠಿ, ಕಾರ್ಯಾಗಾರ ಹಾಗೂ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುತ್ತಿದೆ. ಇದಕ್ಕೆ ಪೂರಕವಾಗಿ ತರಬೇತಿದಾರರು ಮತ್ತು ವಿಷಯ ಪರಿಣತರಿಗೆ ವಸತಿ ಸೌಕರ್ಯವನ್ನು ಕಲ್ಪಿಸಲಾಗಿರುತ್ತದೆ.
10. ಕಬ್ಬು ಮತ್ತು ಸಕ್ಕರೆ ಉದ್ದಿಮೆಗೆ ಸಂಬಂಧಿತ ವಿಷಯಗಳ ಮಾಹಿತಿಯನ್ನು ಪ್ರಕಟಣೆ ಮೂಲಕ ಪ್ರಚುರ ಪಡಿಸುವುದು.

ಈ ಸಂಸ್ಥೆಯ ಸ್ಥಾಪನೆಯಿಂದ ಪ್ರಾರಂಭಿಸಿ, ಇಲ್ಲಿಯವರೆಗೂ ಸರ್ಕಾರದಿಂದ ಅಗತ್ಯವಾದ ಸಹಾಯಧನ, ಭೂಮಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. ಮುಂದಿನ ದಿನಗಳಲ್ಲೂ ಸಹ ಅಗತ್ಯವಿರುವ ಆರ್ಥಿಕ ನೆರವನ್ನು ನೀಡುವ ಮೂಲಕ ಸಂಸ್ಥೆಯ ಪೂರ್ಣ ಅಭಿವೃದ್ಧಿಗೆ ಸರ್ಕಾರವು ನೆರವಾಗಲಿದೆ. ಮಹಾರಾಷ್ಟ್ರ ರಾಜ್ಯದ ಪುಣೆಯಲ್ಲಿ ಸ್ಥಾಪಿತವಾಗಿರುವಂತಹ ವಸಂತದಾದಾ ಸಕ್ಕರೆ ಸಂಸ್ಥೆಯ ಮಾದರಿಯಲ್ಲಿ ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಅಭಿವೃದ್ಧಿಗೊಳಿಸುವ ದಿಸೆಯಲ್ಲಿ ವಸಂತದಾದಾ ಸಕ್ಕರೆ ಸಂಸ್ಥೆಯ ಬಗ್ಗೆ ವಿಷಯ ತಜ್ಞರಿಂದ ಸಮಗ್ರ ಅಧ್ಯಯನ ನಡೆಸಿ, ವರದಿ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

---

ಸಿಐ 32 ಎಸ್‌ಜಿಎಫ್ 2021

( ಎನ್. ನಾಗರಾಜು.ಎಂ.ಟಿ.ಬಿ.)
ಪೌರಾಡಳಿತ ಮತ್ತು ಸಕ್ಕರೆ ಸಚಿವರು